# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1358(1569)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಯೋಜನಾ ಸಚಿವರು

ವಿಷಯ : ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನ ವಿಳಂಬ ಅಗುತ್ತಿರುವ ಕುರಿತು

(ಅ) ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಬಿಡುಗಡೆ ಮಾಡುವಲ್ಲಿ ವಿಳಂಬವಾಗುತ್ತಿರುವುದರಿಂದ ಸ್ಥಳೀಯ ಅಭಿವೃದ್ಧಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಶಾಸಕರ ಪ್ರದೇಶಾಭಿವೃದ್ಧಿ ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆಯೇ; (ಮಾಹಿತಿ ನೀಡುವುದು)

(ಆ) ಹಾಲಿ ನೀಡಲಾಗುತ್ತಿರುವ ಶಾಸಕರ ಸ್ಥಳೀಯ ಪ್ರದೇಶಾಭಿದ್ಧಿ ನಿಧಿಯ ಅನುದಾನ ವಾರ್ಷಿಕ ಎರಡು ಕೋಟಿ ರೂಪಾಯಿಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಅನುದಾನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಶಾಸಕರ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಎಷ್ಟು ಹೆಚ್ಚಳ ಮಾಡಲಾಗುವುದು ಮತ್ತು ಯಾವಾಗ ಹೆಚ್ಚಳ ಮಾಡಲಾಗುವುದು? (ಮಾಹಿತಿ ನೀಡುವುದು)